C.R.P.67

| Form No.4 (Civil) Deposition Sheets (R.P.No.57) |
|---|

**1 ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬೆಂಗಳೂರು.**

ಸ್ಪೆಷಲ್ ಸಿ ಸಂಖ್ಯೆ: **49/2020**

ಪ್ರಾಸಾ. **15** ಚಾಸಾ. **27**

| | | |
|---|---|---|
| ಸಾಕ್ಷಿದಾರರ ಹೆಸರು | : | ಬೈಲಪ್ಪ |
| ತಂದೆಯ ಹೆಸರು | : | ಲೇಟ್. ದೊಡ್ಡ ಲಕ್ಷ್ಮಯ್ಯ |
| ವಯಸ್ಸು | : | 65 ವರ್ಷಗಳು |
| ಉದ್ಯೋಗ | : | ವ್ಯವಸಾಯ |
| ವಾಸ | : | ಕೊಟ್ಟಿಗೆ ಮಾಚೇನಹಳ್ಳಿ, ದೊಡ್ಡಬಳ್ಳಾಪುರ ತಾಲ್ಲೂಕ. |

ಪ್ರಮಾಣ ವಚನ ಬೋಧಿಸಿದ ದಿನಾಂಕ: **01.04.2026.**

ಮುಖ್ಯ ವಿಚಾರಣೆ: ಮಾನ್ಯ ಸರ್ಕಾರಿ ಅಭಿಯೋಜಕರಿಂದ

ನಾನು ಕೊಟ್ಟಿಗೆ ಮಾಚೇನಹಳ್ಳಿ ಗ್ರಾಮದಲ್ಲಿ ವಾಸವಾಗಿದ್ದು ಆರೋಡಿ ಗ್ರಾಮದಲ್ಲಿ ಸರ್ವೆ ಸಂಖ್ಯೆ 313 ರಲ್ಲಿ 1 ಎಕರೆ ವಿಸ್ತೀರ್ಣದ ಸ್ವತ್ತನ್ನು ಹೊಂದಿದ್ದೇನೆ. ಅದು ನನ್ನ ಪಿತ್ರಾರ್ಜಿತ ಸ್ವತ್ತಾಗಿದ್ದು ಅದರ ಖಾತೆ ಬದಲಾವಣೆ ಕುರಿತಂತೆ ನಾನು ಸಂಬಂಧಪಟ್ಟ ತಹಸೀಲ್ದಾರ್ ರವರಿಗೆ ಅರ್ಜಿ ಸಲ್ಲಿಸಿದ್ದೇನೆ. ಸದರಿ ಜಮೀನಿನ ಬಳಿ ನರಸಿಂಹಸ್ವಾಮಿ ದೇವಸ್ಥಾನವಿದೆ.

2. ಪ್ರಶ್ನಿಸಿದಂತೆ ನನಗೆ ಘಟನೆ ಬಗ್ಗೆ ಯಾವುದೇ ವಿಚಾರ ಗೊತ್ತಿಲ್ಲ. ನನ್ನನ್ನು ಪೋಲೀಸರು ವಿಚಾರಿಸಿಲ್ಲ. ನಾನು ಯಾರ ವಿರುದ್ಧವೂ ಪೋಲೀಸರಿಗೆ ಹೇಳಿಕೆ ನೀಡಿಲ್ಲ.

**(**ಮಾನ್ಯ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಬೇಕೆಂದು ಕೋರಿದ್ದು**,** ಕೋರಿಕೆ ಸಮರ್ಪಕವಾಗಿದ್ದು ಪುರಸ್ಕರಿಸಲಾಗಿದೆ ಮತ್ತು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಲಾಗಿದೆ**.)**

<u>ಪಾಟೀ ಸವಾಲುಃ ಮಾನ್ಯ ಸರ್ಕಾರಿ ಅಭಿಯೋಜಕರಿಂದ</u>

3. ನಾನು ಉಲ್ಲೇಖಿಸಿದ ಸರ್ವೆ ಸಂಖ್ಯೆ ಜಮೀನು ಮೂಲತಃ ಗೋಮಾಳ ಜಮೀನು ಎಂದರೆ ಸರಿ. ನಾನು 2018 ರಲ್ಲಿ ನನ್ನ ಹೆಸರಿಗೆ ಸದರಿ ಜಮೀನನ್ನು ಮಂಜೂರು ಮಾಡಬೇಕೆಂದು ಕೋರಿ ನಾನು ತಹಸೀಲ್ದಾರ್ ರವರಿಗೆ ಅರ್ಜಿ ಸಲ್ಲಿಸಿದ್ದೆ ಎಂದರೆ ಸರಿ. ಈ ವರೆಗೂ ಸದರಿ ನನ್ನ ಅರ್ಜಿ ಪುರಸ್ಕೃತಗೊಂಡಿಲ್ಲ. ನಾನು ಪ್ರಶ್ನಿಸಿದಂತೆ ದಿನಾಂಕ 16.08.2018 ರಂದು ಸಿದ್ದಣ್ಣ ಮತ್ತು ಇತರರಿಗೆ ಸದರಿ ಜಮೀನಿನಲ್ಲಿ ಕುರಿ ಮಂದೆ ಹೂಡಲು ಹೇಳಿರಲಿಲ್ಲ. ನಾನು ನನಗೆ ಈಗ ಓದಿ ಹೇಳಿದಂತೆ ಹೇಳಿಕೆ ನೀಡಿದ್ದೇನೆ ಅಂದರೆ "ದಿನಾಂಕ 16.08.2018 .................... ಕ್ರಮ ಕೈಗೊಳ್ಳಬೇಕೆಂದು ಕೋರುತ್ತೇನೆ" ರಂತೆ ಹೇಳಿಕೆ ನೀಡಿದ್ದೇನೆ ಎಂದರೆ ಸರಿಯಲ್ಲ. ಸಾಕ್ಷಿ ಅಲ್ಲಗಳೆದ ಹೇಳಿಕೆಯನ್ನು ಈಗ ನಿ**.**ಪಿ**-37** ಎಂದು ಗುರುತಿಸಲಾಯಿತು.

<u>ಪಾಟೀ ಸವಾಲುಃ ಆರೋಪಿತರ ಪರ ವಕೀಲರಿಂದಃ</u>

ಆರೋಪಿತರ ಪರ ವಕೀಲರು ಹಾಜರಿದ್ದು ತಮ್ಮದು ಪಾಟೀ ಸವಾಲು ಏನೂ ಇಲ್ಲ ಎಂದು ಹೇಳುತ್ತಿದ್ದಾರೆ, ಆದ್ದರಿಂದ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

**(**ನನ್ನ ಉಕ್ತಲೇಖನದ ಮೇರೆಗೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು**)**

ಓ. ಹೇ. ಕೇ. ಸ. ಒ.

(ಸಿದ್ದಲಿಂಗ ಪ್ರಭು)
1 ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬೆಂಗಳೂರು.